**ಓ.ಎಸ್.ನಂಃ 272/2025**

**ಪಿಡಬ್ಲ್ಯೂ–1**

**<u>ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 04.02.2026 ರಂದು ಪ್ರಮಾಣಿಕರಿಸಲಾಯಿತು.</u>**

**<u>ಮುಖ್ಯ ವಿಚಾರಣೆ: ವಾದಿ ಪರ ವಕೀಲರಿಂದ</u>**

ನಾನು ಈ ದಿನ ನ್ಯಾಯಾಲಯದಲ್ಲಿ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಮಾಹಿತಿಯನ್ನು ನಾನೇ ವಕೀಲರಿಗೆ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಸತ್ಯವಾಗಿರುತ್ತದೆ ಮತ್ತು ಅದಕ್ಕೆ ನಾನು ಸಹಿ ಮಾಡಿರುತ್ತೇನೆ.

ಡಿಮಾಂಡ್ ರಿಜಿಸ್ಟರ್ ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ1 ಎಂದು ಗುರುತಿಸಲಾಯಿತು. ಏಳು ಕಂದಾಯ ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ2 ರಿಂದ ನಿಪಿ8 ಎಂದು ಗುರುತಿಸಲಾಯಿತು. ರಶೀದಿ ನಮೂನೆ–03 ರ ಎರಡು ಅರ್ಜಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ9 ಮತ್ತು ನಿಪಿ10 ಎಂದು ಗುರುತಿಸಲಾಯಿತು. ನಿರಪೇಕ್ಷಣ ಪತ್ರವನ್ನು ನೀಡುವ ಕುರಿತು ಸಲ್ಲಿಸಿರುವ ಅರ್ಜಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ11 ಎಂದು ಗುರುತಿಸಲಾಯಿತು. ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ12 ಎಂದು ಗುರುತಿಸಲಾಯಿತು. ದಿಃ 03.12.2024 ರ ಅರ್ಜಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ13 ಎಂದು ಗುರುತಿಸಲಾಯಿತು. ದಿಃ 17.12.2024 ರ ಅರ್ಜಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ14 ಎಂದು ಗುರುತಿಸಲಾಯಿತು. ಅಳತೆಯ ನೋಟೀಸ್ ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ15 ಎಂದು ಗುರುತಿಸಲಾಯಿತು.

ದಿಃ 17.02.2025 ರ ನೋಟೀಸ್ ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ16 ಎಂದು ಗುರುತಿಸಲಾಯಿತು. ದಿಃ 29.07.2025 ರ ನೋಟೀಸ್ ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ17 ಎಂದು ಗುರುತಿಸಲಾಯಿತು. ಮೂರು ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ18 ರಿಂದ ನಿಪಿ20 ಎಂದು ಗುರುತಿಸಲಾಯಿತು. ಅಂಚೆ ಸ್ವೀಕೃತಿಯನ್ನು

ಹಾಜರುಪಡಿಸಿದ್ದು, ಅದನ್ನು ನಿಪಿ21 ಎಂದು ಗುರುತಿಸಲಾಯಿತು. ತೆರೆಯದ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ22 ಎಂದು ಗುರುತಿಸಲಾಯಿತು. ಅದರಲ್ಲಿರುವ ನೋಟೀಸ್ ನ್ನು ಹಾಜರುಪಡಿಸಿದ್ದು, ಅದನ್ನು ನಿಪಿ22(ಎ) ಎಂದು ಗುರುತಿಸಲಾಯಿತು. ತಾಲ್ಲೂಕು ಪಂಚಾಯಿತಿ ಅಧಿಕಾರಿಯವರು ರವರು ಹೊರಡಿಸಿರುವ ಆದೇಶವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ23 ಎಂದು ಗುರುತಿಸಲಾಯಿತು. ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ24 ಎಂದು ಗುರುತಿಸಲಾಯಿತು. ಕರ್ನಾಟಕ ಮಾಹಿತಿ ಆಯೋಗ ಹೊರಡಿಸಿರುವ ಆದೇಶವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ25 ಎಂದು ಗುರುತಿಸಲಾಯಿತು.

**ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ, ಸಮಯ ನೀಡಿ ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಗೆ ಉಕ್ತ ಲೇಖನ ಕೊಟ್ಟು ಓದಿ ನೋಡಿ ಸರಿಪಡಿಸಿ ನಂತರ ಸಹಿ ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**
ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಗುಂಡ್ಲುಪೇಟೆ